Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.61(ಎಸ್.ಕೆ ಗಾರ್ಡೆನ್)

## ವಾರ್ಡ್ ಸಮಿತಿ ಸಭೆ, ದಿನಾಂಕ:16-01-2021 ರ ಸಭಾ ನಡವಳಿ

**ಸಂಖ್ಯೆ:** ಸ.ಕಾನಿ.ಅ (ಪು.ನ)/ಪಿಆರ್/08/20-21

ದಿನಾಂಕ: 02-01-2021 ರಂದು ಮದ್ಯಾಹ್ನ 01.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡೆನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | Atif Ahmed | Nodal Officer ward No. 61-S.K Garden & Asst. Executive Engineer, Hebbal Sub-division |
| 2. | Ravi waddar | Assistant Executive Engineer Pulakeshi Nagar Sub Division |
| 3. | Dr. Zaiba | Medical Officer |
| 4. | Venkatesh | Senior Health Inspector |
| 5. | Harish | JHI Ward No 61 |
| 6. | Srinivas | Senior Vetenary Inspector |
| 7. | Smt: M. Meena | Welfare Tailoring Teacher |
| 8. | Ragavendra N | Tax Inspector |
| 9. | Narasimhaiah | BWSSB |
| 10. | Manohar | JE Bescom |
| 11. | Anand | JE Bescom |

ಶ್ರೀ ಅತೀಫ್ ಅಹಮ್ಮದ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹೆಬ್ಬಾಳ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 02-01-2020 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.
- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**
  1. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಚಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯಾ ಕ್ರಮ ವಹಿಸಲು ಸೂಚಿಸಲಾಯಿತು.
  2. ಪ್ರತಿ ದಿನ ವಾರ್ಡ್ ಪ್ರದೇಶದಲ್ಲಿ ಉತ್ಪತಿಯಾಗು ತ್ಯಾಜ್ಯ ವಿಲೇವಾರಿ ಅಭಿವೃದ್ಧಿ ಮಾಡುವಂತೆ ಸಂಬಂದಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
  3. ರಸ್ತೆ ಬದಿಯಲ್ಲಿ ಕಸ ಹಾಕುವವರಿಗೆ ದಂಡ ವಿಧಿಸಲು ಸೂಚಿಸಲಾಯಿತು
- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ:**
  1. ವಾರ್ಡ್ ಪ್ರದೇಶ ಸಾರ್ವಜನಿಕರಿಗೆ ಕೋವಿಡ್-19 ರ ಪರೀಕ್ಷೆ (Rapid Checkup) ಹೆಚ್ಚು ಮಾಡುವಂತೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.

- **ವಿದ್ಯುತ್ ವಿಭಾಗದರವರಿಗೆ:**
  1. ರಸ್ತೆಯ ಬೀದಿ ಕೇಬಲ್ ದುರಸ್ಥಿಯನ್ನು ಬಿಬಿಎಂಪಿ ಮತ್ತು ಬಸ್ಕಾಂ ಸೇರಿ ಈ ಕೂಡಲೇ ಸರಿಪಡಿಸುವಂತೆ ಸೂಚಿಸಲಾಯಿತು.
  2. Street Light at S.K Garden Main Road, William town and Pyatri Town ನಲ್ಲಿ ಸರಿಪಡಿಸಲು ಸೂಚಿಸಲಾಯಿತು.
- **ಕಲ್ಯಾಣ ಇಲಾಖೆ:**
  1. ಒಂಟಿ ಮನೆ ನಿರ್ಮಾಣ ಮಾಡಿರುವ ಫಲಾನುಭವಿಗಳಿಗೆ ಕಂತಿನ ಹಣ ಪಾವತಿ ಮಾಡಲು ಸೂಚಿಸಲಾಯಿತು.
- **ಪಶುಸಂಗೋಪನೆ:**
  1. ಮೋದಿ ಗಾರ್ಡನ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದರ ಬಗ್ಗೆ ಸೂಕ್ತ ಕ್ರಮ ವಹಿಸಲು ಸೂಚಿಸಲಾಯಿತು.
  2. ಅಕ್ರಮ ಮಾಂಸದ ಅಂಗಡಿಗಳಿಗೆ ನೋಟಿಸ್ ನೀಡಲು ತಿಳಿಸಿದೆ.
  3. ಪ್ರಾಣಿ ತ್ಯಾಜ್ಯವನ್ನು ವಾರ್ಡ್ ಪ್ರದೇಶದಲ್ಲಿ ಡಂಪಿಂಗ್ ಮಾಡುವ ಅಂಗಡಿ ಮಾಲೀಕರಿಗೆ ದಂಡ ವಿಧಿಸಲು ಸೂಚಿಸಲಾಯಿತು.
- **ಕಾಮಗಾರಿ ಇಲಾಖೆ.**
  1. ಎಸ್.ಕೆ ಗಾರ್ಡನ್ ಮುಖ್ಯ ರಸ್ತೆಗಳಲ್ಲಿ ಪಾಟ್ ಹೋಲ್ಸ್ (Pot holes) ಕಾಮಗಾರಿಯನ್ನು ನಿರ್ವಹಿಸುವಂತೆ ಹಾಗೂ ಡೆಬ್ರಿಸ್ ಅನ್ನು ತೆಗೆಯಲು ಸೂಚಿಸಲಾಗಿದೆ.
  2. ಪ್ಯಾಟ್ರೀ ಟೌನ್ ಮುಖ್ಯರಸ್ತೆಯಲ್ಲಿ ಮೆಟ್ರೋ ಕಾಮಗಾರಿ ಆಗುತ್ತಿದ್ದು, (Pot holes) ಬಿಟ್ಟು ಸಂಚಾರಕ್ಕೆ ತೊಂದರೆ ಆಗುತ್ತಿದ್ದು, ಕೂಡಲೇ ಸರಿಪಡಿಸಲು ತಿಳಿಸಲಾಗಿದೆ.
  3. ಎ.ಕೆ ಕಾಲೋನಿ ಯಲ್ಲಿ ಸಿ.ಸಿ ರಸ್ತೆ ನಿರ್ಮಾಣ ಮಾಡಲು ಸೂಚಿಸಲಾಯಿತು.
  4. ಡಿ.ಎನ್.ಮುರಳಿ ರವರು ಮಾನ್ಯ ಜಂಟಿ ಆಯುಕ್ತರು ಪೂರ್ವರವರಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ವಾಸವಿರುವ ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ 53 ಒಂಟಿ ಮನೆಗಳನ್ನು ನಿರ್ಮಿಸಲು ಆದೇಶ ನೀಡುವಂತೆ ಕೋರಿಕೊಂಡಿರುವ ಮೇರೆಗೆ ವಾರ್ಡ್ ಸಮಿತಿ ಸಭೆಯಲ್ಲಿ ಸದರಿ ವಿಷಯದ ಬಗ್ಗೆ ಚರ್ಚಿಸಿ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು, ಪುಲಕೇಶಿ ನಗರ ವಿಭಾಗರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
- **ಕಂದಾಯ ಇಲಾಖೆ:**
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಆದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.
- **ಬಿ.ಡಬ್ಲ್ಯೂ.ಎಸ್.ಎಸ್.ಬಿ**
  1. Williams Town and S.K Garden ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಸೂಚಿಸಲಾಯಿತು

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಅತೀಫ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ.